CW.3 PW.3

## ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ

# CC No.687/2021

| | |
|---|---|
| ಸಾಕ್ಷಿದಾರರ ಹೆಸರು | ಪ್ರಮೋದ್ |
| ತಂದೆಯ ಹೆಸರು | ಮುದ್ದಯ್ಯ |
| ವಯಸ್ಸು | 47 ವರ್ಷ |
| ವೃತ್ತಿ | ಆಟೋ ಚಾಲಕ |
| ವಿಳಾಸ | ಅಂಬೇಡ್ಕರ್ ನಗರ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕ: | 27.03.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದ:-**

ಆರೋಪಿಯನ್ನು ನಾನು ನೋಡಿರುವುದಿಲ್ಲ. ಚಾಸಾ-1 ಮತ್ತು 2, 4 ರಿಂದ 13 ರವರು ಗೊತ್ತಿರುವುದಿಲ್ಲ.

ಸುಮಾರು 4-5 ವರ್ಷಗಳ ಹಿಂದೆ ನಾನು ಪೈಪ್ ಲೈನ್ ರಸ್ತೆಯಲ್ಲಿ ಹೋಗುತ್ತಿದ್ದಾಗ ಪೋಲೀಸರು ನನ್ನ ಬಳಿ ಒಂದು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ. ನಾನು ಯಾವುದೇ ಅಪಘಾತ ನೋಡಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

CW.3 PW.3

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 05.03.2019 ರಂದು ಕನಕಪುರ ಟೌನ್ ಕೆ ಹೆಚ್ ಬಿ ಕಾಲೋನಿ ಬಳಿ ಇರುವ ಕನಕಪುರ ಸಾತನೂರು ರಸ್ತೆ ಹಾಗೂ ಬಿಡಬ್ಲ್ಯೂ ಎಸ್ ಎಸ್ ಬಿ ಪೈಪ್ ಲೈನ್ ಕ್ರಾಸ್ ಜಂಕ್ಷನ್ ಬಳಿ ಕನಕಪುರ ಸಾತನೂರು ರಸ್ತೆಯ ಬಳಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-4 ರವರ ಸಮಕ್ಷಮ ಸಂಜೆ 4 ರಿಂದ 5 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ಸ್ಥಳದಲ್ಲಿ ಅಪಘಾತ ಪಡಿಸಿದ ಹಾಗೂ ಅಪಘಾತಕ್ಕೆ ಒಳಗಾದ ವಾಹನಗಳನ್ನು ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ಗೊತ್ತಿದ್ದರೂ ಸಹಿತ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**